# ಕರ್ನಾಟಕ ವಿಧಾನ ಪರಿಷತ್ತು

1. **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 580
2. **ಸದಸ್ಯರ ಹೆಸರು** : ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು)
3. **ಉತ್ತರಿಸಬೇಕಾದ ದಿನಾಂಕ** : 13.12.2024
4. **ಉತ್ತರಿಸುವವರು** : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮತ್ತು ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| (ಅ) | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳು ಖಾಲಿಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ |
| (ಆ) | ಬಂದಿದ್ದಲ್ಲಿ, ಹುದ್ದೆಗಳು ಖಾಲಿಯಿರುವುದರಿಂದ ಸಾರ್ವಜನಿಕ ಕಾರ್ಯಗಳಿಗೆ ಮತ್ತು ಆಡಳಿತಾತ್ಮಕವಾಗಿ ಅನಾನುಕೂಲವಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ; | ಖಾಲಿ ಇರುವ ಹುದ್ದೆಗಳಿಗೆ ಹೆಚ್ಚುವರಿ ಪ್ರಭಾರದಲ್ಲಿ ಅಧಿಕಾರಿಗಳನ್ನು ನೇಮಕ ಮಾಡಲಾಗಿದ್ದು, ಆಡಳಿತಾತ್ಮಕ ಕಾರ್ಯಗಳಿಗೆ ಅಡಚಣೆಯಾಗದಂತೆ ಕಾರ್ಯ ನಿರ್ವಹಿಸಲಾಗುತ್ತಿದೆ. |
| (ಇ) | ಖಾಲಿಯಿರುವ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವ ಸರ್ಕಾರದ ಮುಂದಿದೆಯೇ; | ಪ್ರಸ್ತುತ ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ ಕಾರ್ಯನಿರ್ವಾಹಕ ಅಧಿಕಾರಿ / ಸಹಾಯಕ ಕಾರ್ಯದರ್ಶಿ ಹುದ್ದೆಗಳ ಪೈಕಿ 2023-24ನೇ ಸಾಲಿನಲ್ಲಿ-20 ಮತ್ತು 2024-25ನೇ ಸಾಲಿನಲ್ಲಿ-20 ಹುದ್ದೆಗಳನ್ನು ಒಟ್ಟು 40 ಹುದ್ದೆಗಳನ್ನು ಭರ್ತಿ ಮಾಡಲು ಅಗತ್ಯ ಕ್ರಮ ವಹಿಸುವಂತೆ ಕೋರಿ ದಿನಾಂಕ: 22.01.2024ರಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.<br><br>ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯು ಕಾರ್ಯನಿರ್ವಾಹಕ ಅಧಿಕಾರಿ / ಸಹಾಯಕ ಕಾರ್ಯದರ್ಶಿ ವೃಂದದ ಒಟ್ಟು-40 ಹುದ್ದೆಗಳನ್ನು ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕ ಮಾಡಲು ನೇಮಕಾತಿ ಪ್ರಕ್ರಿಯೆಯನ್ನು ಜರುಗಿಸುವಂತೆ ಕೋರಿ ದಿನಾಂಕ: 02.02.2024ರಂದು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತದೆ. ಪ್ರಸ್ತುತ ಲೋಕಸೇವಾ ಆಯೋಗದಲ್ಲಿ ನೇಮಕಾತಿ ಪ್ರಕ್ರಿಯೆ ಚಾಲನೆಯಲ್ಲಿರುತ್ತದೆ. |

| | | |
|---|---|---|
| | | ಪೋಷಕ ವೃಂದವಾದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಂದ ಸಹಾಯಕ ನಿರ್ದೇಶಕರ ಹುದ್ದೆಗೆ ಮತ್ತು ಅರ್ಹ ಸಹಾಯಕ ನಿರ್ದೇಶಕರುಗಳಿಗೆ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗೆ ಪದೋನ್ನತಿ ನೀಡಲು ಪೋಷಕ ವೃಂದವಾದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದದ ಜೇಷ್ಠತಾ ಪಟ್ಟಿಗೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಪ್ರಕರಣವು ಬಾಕಿ ಇದ್ದು, ಮಾನ್ಯ ನ್ಯಾಯಾಲಯದ ಅಂತಿಮ ತೀರ್ಪು ಬಂದ ನಂತರ ಅರ್ಹ ಸಹಾಯಕ ನಿರ್ದೇಶಕರುಗಳಿಗೆ ನಿಯಮಾನುಸಾರ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗೆ ಪದೋನ್ನತಿ ನೀಡಲು ಪರಿಶೀಲಿಸಲಾಗುವುದು<br>ನೇರ ನೇಮಕಾತಿ ಕೋಟಾದಡಿ ಖಾಲಿಯಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದದ ಕಲ್ಯಾಣ ಕರ್ನಾಟಕದ 97 ಹುದ್ದೆಗಳು ಮತ್ತು ಕಲ್ಯಾಣ ಕರ್ನಾಟಕೇತರ 150 ಹುದ್ದೆಗಳು ಸೇರಿದಂತೆ ಒಟ್ಟು 247 ಹುದ್ದೆಗಳಿಗೆ ನೇಮಕಾತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.<br>ಮುಂಬಡ್ತಿ ಕೋಟಾದಡಿ ಖಾಲಿಯಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳನ್ನು ಅಧಿಕಾರಿ / ನೌಕರರ ಜೇಷ್ಠತೆ, ಸೂಕ್ತತೆ ಹಾಗೂ ಅರ್ಹತೆ ಆಧರಿಸಿ ನಿಯಮಾನುಸಾರ ಮುಂಬಡ್ತಿ ನೀಡುವ ಮೂಲಕ ಭರ್ತಿ ಮಾಡಿಕೊಳ್ಳಲು ಕ್ರಮವಹಿಸಲಾಗುತ್ತಿದೆ. |
| **(ಈ)** | ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸದರಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು? (ಪೂರ್ಣ ವಿವರ ಒದಗಿಸುವುದು) | ಕರ್ನಾಟಕ ಲೋಕಸೇವಾ ಆಯೋಗವು ಆಯ್ಕೆ ಪ್ರಾಧಿಕಾರವಾಗಿದ್ದು ಆಯ್ಕೆ ಪಟ್ಟಿಯನ್ನು ಅಂತಿಮಗೊಳಿಸಿ ಸರ್ಕಾರಕ್ಕೆ ಕಳುಹಿಸಿದ ನಂತರ ಕ್ರಮವಹಿಸಲಾಗುವುದು. |

ಸಂಖ್ಯೆ: ಗ್ರಾಅಪ 294 ಪಬವ 2024 (ಇ)

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮತ್ತು
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು